# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 25 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸುವುದು ಎಲ್ಲಾ ಮೆಟ್ರಿಕ್ ಪೂರ್ವ/ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪರಸ್ಪರ ಪ್ರವೇಶ ನೀಡಲಾಗುವುದು. ಐದು ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಮೇಲ್ದರ್ಜೆಗೇರಿಸಲು ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:** 1. 2018-19ನೇಸಾಲಿನ ಆಯವ್ಯಯ ಭಾಷಣದ **ಕಂಡಿಕೆ ಸಂಖ್ಯೆ 218.**

2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ:ಅಸಂನಿ/ವಿನಿ/ಸಂ.ಬ/ಮೇ.ದ/ಸಿಆರ್-15/2018-19 ದಿನಾಂಕ: 04-04-2018.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ **ಕಂಡಿಕೆ-218 ರಲ್ಲಿ 25 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸುವುದು ಎಲ್ಲಾ ಮೆಟ್ರಿಕ್ ಪೂರ್ವ/ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪರಸ್ಪರ ಪ್ರವೇಶ ನೀಡಲಾಗುವುದು. ಐದು ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಿಸಿರುತ್ತಾರೆ.**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಹಾಸನ, ಮೈಸೂರು, ಬಳ್ಳಾರಿ ಮತ್ತು ಕಲಬುರಗಿ ಜಿಲ್ಲೆಯಲ್ಲಿ 05 ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಕಡಿಮೆ ಇರುವುದರಿಂದ ದಿನಪತ್ರಿಕೆಗಳಲ್ಲಿ ಮತ್ತು ಶಾಲೆಗಳಲ್ಲಿ ಮತ್ತು ಅರಿವು ಮೂಡಿಸುವ ಮಾಹಿತಿ ಕೇಂದ್ರದಿಂದ ಪ್ರಚಾರ ನೀಡಲಾಗಿದ್ದರು ಸಹ ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾತಿ ಪಡೆದಿರುವುದಿಲ್ಲ ಹಾಗೂ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯಗಳಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ 05 ಮೆಟ್ರಿಕ್ ಪೂರ್ವ ಬಾಲಕ ವಿದ್ಯಾರ್ಥಿನಿಲಯಗಳನ್ನು ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನಾಗಿ ಮೇಲ್ದದರ್ಜೆಗೇರಿಸಬೇಕಾಗಿರುತ್ತದೆ.

ಮುಂದುವರೆದು, ಮೆಟ್ರಿಕ್ ನಂತರ ವಿದ್ಯಾರ್ಥಿನಿಯರಿಗೆ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಸ್ಥಳವಕಾಶ ಮಾಡಿಕೊಡಲಾಗುವುದು ಎಂದು ಘೋಷಿಸಿರುತ್ತಾರೆ.

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರನ್ನು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ

...2

ಮೆಟ್ರಿಕ್ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರನ್ನು ಪರಸ್ಪರ ದಾಖಲಾತಿ ಮಾಡಿಕೊಳ್ಳಲು ಸ್ಥಳವಕಾಶ ಮಾಡಿಕೊಡಬಹುದಾಗಿದೆ ಎಂದು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆದೇಶ ಹೊರಡಿಸಲು ಕೋರಿ ಏಕಕಡತ ಪದ್ಧತಿಯನ್ವಯ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 274 MDS 2018, ಬೆಂಗಳೂರು, ದಿನಾಂಕ: 25-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಕಡಿಮೆ ಇರುವುದರಿಂದ ಹಾಗೂ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯಗಳಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ ಕೆಳಕಂಡ 05 ಮೆಟ್ರಿಕ್ ಪೂರ್ವ ಬಾಲಕ ವಿದ್ಯಾರ್ಥಿನಿಲಯಗಳನ್ನು ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆಯ ಹೆಸರು | ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಮೇಲದರ್ಜೆಗೇರಿಸಬೇಕಾದದ್ದು |
|---|---|---|---|
| 1 | ಹಾಸನ | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೊಣ್ಣನೂರು, ಅರಕಲಗೂಡು ತಾ॥ | ಮೆಟ್ರಿಕ್ ನಂತರ **ಬಾಲಕಿಯರ** ವಿದ್ಯಾರ್ಥಿನಿಲಯ, (ಚೆನ್ನಪಟ್ಟಣ ಬಡಾವಣೆ) ಹಾಸನ ನಗರ |
| 2 | ಮೈಸೂರು | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಲಗನಹಳ್ಳಿ, ಪಿರಿಯಾಪಟ್ಟಣ ತಾ॥ | ಮೆಟ್ರಿಕ್ ನಂತರ **ಬಾಲಕರ** ವಿದ್ಯಾರ್ಥಿನಿಲಯ, ಮೈಸೂರು ನಗರ |
| 3 | ಬಳ್ಳಾರಿ | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಡಗಲಿ | ಮೆಟ್ರಿಕ್ ನಂತರ **ಬಾಲಕರ** ವಿದ್ಯಾರ್ಥಿನಿಲಯ, ಹಡಗಲಿ |
| 4 | | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹೊಸಪೇಟೆ | ಮೆಟ್ರಿಕ್ ನಂತರ **ಬಾಲಕರ** ವಿದ್ಯಾರ್ಥಿನಿಲಯ, ಹೊಸಪೇಟೆ |
| 5 | ಕಲಬುರಗಿ | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಯಡ್ರಾಮಿ, ಜೇವರ್ಗಿ ತಾ॥ | ಮೆಟ್ರಿಕ್ ನಂತರ **ಬಾಲಕರ** ವಿದ್ಯಾರ್ಥಿನಿಲಯ, ಯಡ್ರಾಮಿ, ಜೇವರ್ಗಿ ತಾ॥ |

ಮುಂದುವರೆದು, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರನ್ನು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಮೆಟ್ರಿಕ್ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರನ್ನು ಸದರಿ ವಿದ್ಯಾರ್ಥಿನಿಲಯಗಳಲ್ಲಿ ಪರಸ್ಪರ ಮಂಜೂರಾದ ಸಂಖ್ಯೆ ಮೀರದಂತೆ ದಾಖಲಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಆದೇಶಿಸಿದೆ.

**ಷರತ್ತುಗಳು:-**

1. ಮಂಜೂರಾದ ಸಂಖ್ಯೆಗನುಗುಣವಾಗಿ ಹಾಗೂ ನಿಗದಿಪಡಿಸಿದ ಅನುಪಾತದಂತೆ ದಾಖಲಾತಿಗೆ ಕ್ರಮವಹಿಸತಕ್ಕದ್ದು.
2. ಮೇಲ್ದರ್ಜೆಗೇರಿಸಿದ ವಿದ್ಯಾರ್ಥಿನಿಲಯಗಳಲ್ಲಿ ಆದೇಶ ನೀಡಿದ ದಿನಾಂಕದಿಂದ ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ ಕಾಲಕಾಲಕ್ಕೆ ನಿಗದಿಪಡಿಸಿದ ಆಹಾರ ವೆಚ್ಚದಂತೆ ಖರ್ಚು ಭರಿಸತಕ್ಕದ್ದು.

...3